ಹುದ್ದೆಗಳಿರುವುದಿಲ್ಲ. ಪ್ರತಿ ಪ್ರಥಮ ದರ್ಜೆ ಕಾಲೇಜಿನ ಬೋಧಕ ವರ್ಗದವರ ಪೈಕಿ ಸೇವಾ ಹಿರಿತನದಲ್ಲಿ ಹಿರಿಯರಾದವರನ್ನು ಆ ಕಾಲೇಜಿನ ಪ್ರಾಚಾರ್ಯರನ್ನಾಗಿ (ಪ್ರಿನ್ಸಿಪಾಲರನ್ನಾಗಿ) ನೇಮಕ ಮಾಡಲಾಗುತ್ತಿದೆ. ಆದ್ದರಿಂದ ಪ್ರಾಚಾರ್ಯರ (ಪ್ರಿನ್ಸಿಪಾಲರ) ಹುದ್ದೆಗಳು ಖಾಲಿ ಇರುವ ಪ್ರಶ್ನೆ ಉದ್ಭವಿಸುವುದಿಲ್ಲ.

ಆ) 14.

ಇ) ಖಾಲಿ ಇರುವ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು 1991-92ನೇ ಶೈಕ್ಷಣಿಕ ವರ್ಷದಲ್ಲಿ ಕ್ರಮ ತೆಗೆದುಕೊಳ್ಳಲಾಗುವುದು.

ಈ) ಮೇಲ್ಕಂಡ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಸುರತ್ಕಲ್‌ನಲ್ಲಿ ಬಸ್ಸು ನಿಲ್ದಾಣದ ನಿರ್ಮಾಣ

1133 - ಶ್ರೀ ವಿಜಯಕುಮಾರಶೆಟ್ಟಿ (ಸುರತ್ಕಲ್) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯ, ಸುರತ್ಕಲ್‌ನಲ್ಲಿ ಕೆಎಸ್‌ಆರ್‌ಟಿಸಿ, ಬಸ್ ನಿಲ್ದಾಣ ನಿರ್ಮಾಣ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ?

ಆ) ಈ ಮೇಲ್ಕಂಡ ಬಸ್ ನಿಲ್ದಾಣವು ಅತಿ ಅವಶ್ಯಕವಾಗಿದ್ದು ಸರ್ಕಾರ ಎಷ್ಟು ದಿನಗಳಲ್ಲಿ ನಿಲ್ದಾಣವನ್ನು ನಿರ್ಮಿಸುವುದು?

ಶ್ರೀ ಅಜೀಜ್ ಸೇತ್ (ಸಾರಿಗೆ ಸಚಿವರು)

ಅ) ಇಲ್ಲ

ಆ) ಇದು ರಾಷ್ಟ್ರೀಕರಣವಾಗದ ವಲಯದಲ್ಲಿದೆ ಮತ್ತು ಕೆಲವು ಕೆಎಸ್‌ಆರ್‌ಟಿಸಿ, ಬಸ್ಸುಗಳು ಮಾತ್ರ ಈ ಮಾರ್ಗವಾಗಿ ಸಂಚರಿಸುತ್ತವೆ. ಈ ಪಟ್ಟಣದ ಹೆಚ್ಚಿನ ಸಾರಿಗೆ ಅವಶ್ಯಕತೆಗಳನ್ನು ಖಾಸಗಿ ವಾಹನಗಳು ಪೂರೈಸುತ್ತಿವೆ. ಆದರೆ ಸ್ಥಳೀಯ ಅಧಿಕಾರಿಗಳು ಬಸ್ ನಿಲ್ದಾಣವನ್ನು ನಿರ್ಮಿಸುವ ಜವಾಬ್ದಾರಿಯನ್ನು ಹೊಂದಿರುತ್ತಾರೆ ಬಸ್ ನಿಲ್ದಾಣವನ್ನು ನಿರ್ಮಿಸಲು ಸುರತ್ಕಲ್ ಮುನಿಸಿಪಾಲಿಟಿಯವರನ್ನು ಕೇಳಿಕೊಂಡು ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಮಂಗಳೂರು ವಿಶ್ವವಿದ್ಯಾಲಯಕ್ಕಾಗಿ ಆರ್ಥಿಕ ಸಹಾಯ

1222 - ಶ್ರೀ ವಿಜಯಕುಮಾರ್ ಶೆಟ್ಟಿ (ಸುರತ್ಕಲ್) : ಮಾನ್ಯ ಶಿಕ್ಷಣ ಹಾಗೂ ಸಂಸದೀಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಗಳೂರು ವಿಶ್ವವಿದ್ಯಾಲಯ ಸ್ಥಾಪನೆ ಯಾದಾಗಿನಿಂದ ಈವರೆಗೆ ರಾಜ್ಯ ಸರ್ಕಾರ ಹಾಗೂ ಯು.ಜಿ.ಸಿ. ಯಿಂದ ಪಡೆದಿರುವ ಆರ್ಥಿಕ ಸಹಾಯವೆಷ್ಟು?

ಆ) ಮಂಗಳೂರು ವಿಶ್ವವಿದ್ಯಾಲಯ ಹಣಕಾಸಿನ ಮುಗ್ಗಟ್ಟನ್ನು ಎದುರಿಸುತ್ತಿರುವುದು ರಾಜ್ಯ ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಮಂಗಳೂರು ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರವನ್ನು ಮಡಿಕೇರಿಯಲ್ಲಿ ಸ್ಥಾಪಿಸುವ ಉದ್ದೇಶ ಸರ್ಕಾರಕ್ಕಿದೆಯೆ?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ಸಚಿವರು) :

ಅ) ರಾಜ್ಯ ಸರ್ಕಾರದಿಂದ ರೂ. 19,73,44,004-00

ವಿಶ್ವವಿದ್ಯಾಲಯ ಅನುದಾನ ಆಯೋಗದಿಂದ : ರೂ. 1,31,94,966-90.

ಆ) ಇಲ್ಲ